Akashvani : Bangalore
Regional Bulletin In Kannada
11.05.2025 / 2.30pm
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

ಮುಖ್ಯಾಂಶಗಳು:

- ನಾಳೆ ಕಾರವಾರದಲ್ಲಿ ನಾಗರಿಕ ರಕ್ಷಣೆಯ ಅಣಕು ಕಾರ್ಯಾಚರಣೆ

- ದೇಶಾದ್ಯಂತ ಇಂದು ರಾಷ್ಟ್ರೀಯ ತಂತ್ರಜ್ಞಾನ ದಿನಾಚರಣೆ

- ಭಾರತೀಯ ಸೇನೆ ಬೆಂಬಲಿಸಿ ಬೆಂಗಳೂರಿನಲ್ಲಿ ಬಿಜೆಪಿ ತಿರಂಗಾಯಾತ್ರೆ

- ವಾಡಿಕೆಗಿಂತ ಮೊದಲೇ ಕೇರಳ ಪ್ರವೇಶಿಸಲಿರುವ ಮುಂಗಾರು

*****

ತುರ್ತು ಸಂದರ್ಭದಲ್ಲಿ ಪರಿಣಾಮಕಾರಿಯಾಗಿ ನಾಗರೀಕರ ರಕ್ಷಣೆ ಮಾಡುವ "ಆಪರೇಷನ್ ಅಭ್ಯಾಸ್" ಅಣಕು ಕಾರ್ಯಾಚರಣೆ ಅಂಗವಾಗಿ ಕಾರವಾರ ತಾಲೂಕಿನಲ್ಲಿ ನಾಳೆ ಅಣಕು ಕಾರ್ಯಚರಣೆ ನಡೆಸಲಾಗುವುದು ಎಂದು ಉತ್ತರ ಕನ್ನಡ ಜಿಲ್ಲಾಧಿಕಾರಿ ಕೆ. ಲಕ್ಷ್ಮಿಪ್ರಿಯ ಮಾಹಿತಿ ನೀಡಿದ್ದಾರೆ. ಅಣಕು ಕಾರ್ಯಚರಣೆ ಸಂದರ್ಭದಲ್ಲಿ ಜಿಲ್ಲೆಯ ಜನತೆ ಯಾವುದೇ ರೀತಿಯ ಗಾಬರಿ, ಆತಂಕಕ್ಕೆ ಒಳಗಾಗದೇ ಜಿಲ್ಲಾಡಳಿತದೊಂದಿಗೆ ಸಹಕಾರ ನೀಡಬೇಕು ಎಂದು ಮನವಿ ಮಾಡಿದ್ದಾರೆ. ಉತ್ತರ ಕನ್ನಡ ಜಿಲ್ಲೆಯು ಅತ್ಯಂತ ಉದ್ದವಾದ ಕರಾವಳಿ ತೀರವನ್ನು ಹೊಂದಿರುವುದು ಮಾತ್ರವಲ್ಲದೇ ಅನೇಕ ಸೂಕ್ಷ್ಮ ಪ್ರದೇಶಗಳನ್ನು ಒಳಗೊಂಡಿರುವುದರಿಂದ ಈ ಪ್ರದೇಶದಲ್ಲಿ ತುರ್ತು ಸಂದರ್ಭದಲ್ಲಿ ನಾಗರೀಕರ ರಕ್ಷಣೆ ಮಾಡುವ ಅಣಕು ಕಾರ್ಯಚರಣೆ ಮಾಡಲಾಗುತ್ತದೆ. ರಾತ್ರಿ ೭.೩೦ ರಿಂದ ೮ ಗಂಟೆಯ ಅವಧಿಯಲ್ಲಿ ಕಾರವಾರ ನಗರಸಭಾ ವ್ಯಾಪ್ತಿಯಲ್ಲಿ ಮತ್ತು ಕೈಗಾ ಟೌನ್‌ಶಿಪ್‌ನಲ್ಲಿ ಬ್ಲಾಕ್ ಔಟ್ ಅಣುಕು ಕಾರ್ಯಾಚರಣೆ ನಡೆಸಲಾಗುವುದು ಎಂದು ವಿವರಿಸಿದ್ದಾರೆಈ ಸಂದರ್ಭದಲ್ಲಿ ನಾಗರೀಕರು ಸ್ವಯಂ ಪ್ರೇರಿತರಾಗಿ ತಮ್ಮ ಮನೆಯ ಲೈಟ್‌ಗಳನ್ನು ಆಫ್ ಮಾಡಿ, ಸುರಕ್ಷಿತವಾಗಿ ಮನೆಯೊಳಗೆ ಇರಬೇಕು ಮತ್ತು ಸಾರ್ವಜನಿಕ ಸ್ಥಳಗಳಲ್ಲಿ ವಾಹನಗಳ ಚಾಲನೆ ಮಾಡುತ್ತಿದ್ದ ಸಂದರ್ಭದಲ್ಲಿ ವಾಹನ ನಿಲ್ಲಿಸಿ, ಸುರಕ್ಷಿತ ಕಟ್ಟಡದ ಒಳಗೆ ಹೋಗಿ ರಕ್ಷಣೆ ಪಡೆಯುವ ಕುರಿತಂತೆ ಅಣಕು ಕಾರ್ಯಾಚರಣೆ ನಡೆಸಲಾಗುವುದು. ಸಾರ್ವಜನಿಕರು ಸಹಕರಿಸುವಂತೆ ಅವರು ಪ್ರಕಟಣೆಯಲ್ಲಿ ಕೋರಿದ್ದಾರೆ.

*****

ಸಮುದ್ರದಲ್ಲಿ ಯಾವುದೇ ಸಂಶಯಾಸ್ಪದ ವ್ಯಕ್ತಿ ಅಥವಾ ದೋಣಿಗಳು ಕಂಡು ಬಂದರೆ ಕೂಡಲೇ ಕೋಸ್ಟ್ ಗಾರ್ಡ್, ಕರಾವಳಿ ಕಾವಲು ಪಡೆ ಅಥವಾ ಮೀನುಗಾರಿಕಾ ಇಲಾಖೆಗೆ ಮಾಹಿತಿ ನೀಡುವಂತೆ ಉತ್ತರ ಕನ್ನಡ ಜಿಲ್ಲಾ ಮೀನುಗಾರಿಕೆ ಇಲಾಖೆ ಜಂಟಿ ನಿರ್ದೇಶಕ ಬಬೀನ್ ಬೋಪಣ್ಣ ಮೀನುಗಾರರಿಗೆ ಕಾರವಾರದಲ್ಲಿ ಸೂಚನೆ ನೀಡಿದ್ದಾರೆ. ನಾಳೆ ಅಣುಕು ಕವಾಯಿತು ನಡೆಯಲಿರುವ ಹಿನ್ನೆಲೆಯಲ್ಲಿ ಮೀನುಗಾರರು ಹಾಗೂ ದೋಣಿ ಮಾಲಿಕರ ಸಭೆ ನಡೆಸಿ ಅವರು ಮಾತಾನಾಡುತ್ತಿದ್ದರು. ಸಮುದ್ರದಲ್ಲಿ ಮೀನುಗಾರರು ಯಾವುದೇ ಆಮಿಷಕ್ಕೆ ಒಳಗಾಗದೇ ಕರಾವಳಿಯ ಸುರಕ್ಷತೆಗೆ ಒತ್ತು ನೀಡಬೇಕು. ಸಮುದ್ರಕ್ಕೆ ತೆರಳುವ ಮೀನುಗಾರರು ಅಕ್ಕ-ಪಕ್ಕದ ದೋಣಿಗಳು ಹಾಗೂ ಹೊರ ರಾಜ್ಯದ ದೋಣಿಗಳ ಮೇಲೆ ನಿಗಾ ಇಡಬೇಕು. ಜಿಲ್ಲೆಯಲ್ಲಿ ಎಂಟು ಬಂದರುಗಳಿವೆ. ಹೀಗಾಗಿ ನಮ್ಮ ಜನರನ್ನು ಬಿಟ್ಟು ಬೇರೆಯವರ ಓಡಾಟ ಇದ್ದರೆ ತಕ್ಷಣ ಸಂಬಂಧಪಟ್ಟ ಅಧಿಕಾರಿಗಳಿಗೆ ತಿಳಿಸಬೇಕು ಎಂದರು. ಅಣಕು ಕಾರ್ಯಾಚರಣೆಗೆ ಮೀನುಗಾರರರು ಸಹಕಾರ ನೀಡಬೇಕು. ಮಾಕ್ ಡ್ರಿಲ್ ಸಂದರ್ಭದಲ್ಲಿ ಯಾರು ಆತಂಕಕ್ಕೆ ಒಳಗಾಗುವುದು ಬೇಡ ಎಂದು ಸಲಹೆ ನೀಡಿದರು. ನಾಳೆ ರಾತ್ರಿ ೭.೩೦ ರಿಂದ ೮ರ ವೇಳೆ ಸೈರನ್ ಕೂಗಲಾಗುವುದು. ಈ ಸಂದರ್ಭದಲ್ಲಿ ಲೈಟ್ ಬಂದ್ ಮಾಡಿ ಬ್ಲಾಕ್ ಔಟ್ ಮಾಡಬೇಕು. ಸೈರನ್ ಕೇಳಿ ಗೊಂದಲಕ್ಕೆ ಒಳಗಾಗಬಾರದು. ಈಗಾಗಲೇ ಕೋಸ್ಟ್ ಗಾರ್ಡ್, ಕರಾವಳಿ ಕಾವಲು ಪಡೆ ಸಮುದ್ರದಲ್ಲಿ ಗಸ್ತು ತಿರುಗುತ್ತಿದೆ. ನಮ್ಮ ವ್ಯಾಪ್ತಿಯಲ್ಲಿ ನಡೆಯುವ ಚಟುವಟಿಕೆಗಳ ಬಗ್ಗೆ ಮಾಹಿತಿ ನೀಡಿ ದೇಶದ ಭದ್ರತೆಗೆ ಸಹಾಯ ಮಾಡಬೇಕು. ಶತ್ರುಗಳು ಯಾವ ಸ್ವರೂಪದಲ್ಲಾದರೂ ಬರಬಹುದು. ಈ ಎಲ್ಲಾ ವಿದ್ಯಮಾನಗಳ ಬಗ್ಗೆ ಸಮುದ್ರದಲ್ಲಿರುವ ಮೀನುಗಾರರಿಗೆ ಮೊದಲು ಮಾಹಿತಿ ಲಭ್ಯವಾಗುತ್ತದೆ. ಮೀನುಗಾರರು ಯಾವುದೇ ರೀತಿಯ ಆಮಿಷಕ್ಕೆ ಒಳಗಾಗದೆ, ದೇಶ ರಕ್ಷಣೆಗೆ ತಮ್ಮ ಕಿರು ಕಾಣಿಕೆ ನೀಡಬೇಕು ಎಂದರು. ಸಭೆಯಲ್ಲಿ ಕರಾವಳಿ ಕಾವಲು ಪಡೆಯ ಪಿಎಸ್‌ಐ ನಿಶ್ಚಲಕುಮಾರ್, ಜಿಲ್ಲಾ ಮೀನು ಮಾರಾಟ ಫೆಡರೇಶನ್ ಅಧ್ಯಕ್ಷ ವೆಂಕಟೇಶ್ ತಾಂಡೇಲ್, ಪರ್ಸಿನ್ ಬೋಟ್ ಯೂನಿಯನ್ ಅಧ್ಯಕ್ಷ ಗೌರೀಶ್, ಮೀನುಗಾರರು ಸಭೆಯಲ್ಲಿ ಇದ್ದರು.

*****

ಇಂದು ದೇಶಾದ್ಯಂತ ರಾಷ್ಟ್ರೀಯ ತಂತ್ರಜ್ಞಾನ ದಿನವನ್ನು ಆಚರಿಸಲಾಗುತ್ತಿದೆ. ೧೯೯೮ ರಲ್ಲಿ ಈ ದಿನದಂದು ಭಾರತ ರಾಜಸ್ಥಾನದ ಪೋಖ್ರಾನ್‌ನಲ್ಲಿ ತನ್ನ ಪರಮಾಣು ಬಾಂಬ್‌ಗಳನ್ನು ಯಶಸ್ವಿಯಾಗಿ ಪರೀಕ್ಷಿಸಿತ್ತು. ಈ ಹಿನ್ನೆಲೆ ಈ ದಿನವನ್ನು ರಾಷ್ಟ್ರೀಯ ತಂತ್ರಜ್ಞಾನ ದಿನವನ್ನಾಗಿ ಆಚರಿಸಲಾಗುತ್ತಿದೆ. ಭಾರತದ ತಾಂತ್ರಿಕ ಪರಿಣತಿಗೆ ವಿಜ್ಞಾನಿಗಳು, ಎಂಜಿನಿಯರ್‌ಗಳು ಮತ್ತು ನಾವೀನ್ಯಕಾರರ ಕೊಡುಗೆಗಳನ್ನು ಮತ್ತು ಭಾರತದ ಮೊದಲ ಸ್ಥಳೀಯ ವಿಮಾನ "ಹಂಸ -೩" ಉಡಾವಣೆ ಮತ್ತು ಆರನೇ ಜಾಗತಿಕ ಪರಮಾಣು ಪರೀಕ್ಷೆಯನ್ನು ಸ್ಮರಿಸುವ ದಿನವಾಗಿದೆ. ರಾಷ್ಟ್ರೀಯ ತಂತ್ರಜ್ಞಾನ ದಿನ ದೈನಂದಿನ ಜೀವನದಲ್ಲಿ ತಂತ್ರಜ್ಞಾನದ ಪಾತ್ರದ ಪ್ರಾಮುಖ್ಯತೆಯನ್ನು ಒತ್ತಿ ಹೇಳುವ ಜೊತೆಗೆ ವಿಜ್ಞಾನ ಮತ್ತು ತಂತ್ರಜ್ಞಾನದಲ್ಲಿ ಯುವಜನರ ಆಸಕ್ತಿಯನ್ನು ಉತ್ತೇಜಿಸುತ್ತದೆ. ಸಾಮಾಜಿಕ ಸವಾಲುಗಳನ್ನು ಎದುರಿಸುವಲ್ಲಿ ಮತ್ತು ದೈನಂದಿನ ಜೀವನವನ್ನು ಸುಧಾರಿಸುವಲ್ಲಿ ತಂತ್ರಜ್ಞಾನದ ಪಾತ್ರದ ಬಗ್ಗೆ ಈ ದಿನವು ಜಾಗೃತಿ ಮೂಡಿಸುತ್ತದೆ. ತಮ್ಮ ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಅವರು, ೧೯೯೮ ರಲ್ಲಿ ಯಶಸ್ವಿ ಪೋಖ್ರಾನ್ ಪರೀಕ್ಷೆಗಳಿಗೆ ಕಾರಣವಾದ ವಿಜ್ಞಾನಿಗಳ ಅಸಾಧಾರಣ ಪ್ರಯತ್ನಗಳನ್ನು ದೇಶವು ಹೆಮ್ಮೆಯಿಂದ ಸ್ಮರಿಸುತ್ತದೆ ಎಂದು ಹೇಳಿದ್ದಾರೆ.

*****

ಭಯೋತ್ಪಾದಕರ ವಿರುದ್ಧ ಆಪರೇಷನ್ ಸಿಂಧೂರ ಕಾರ್ಯಾಚರಣೆ ನಡೆಸಿರುವ ಭಾರತೀಯ ಸೇನೆಗೆ ಬೆಂಬಲ ಸೂಚಿಸಿ ಬೆಂಗಳೂರು ನಗರದಲ್ಲಿ ಬಿಜೆಪಿ ತಿರಂಗ ಯಾತ್ರೆ ನಡೆಸಿತು. ಈ ಸಂದರ್ಭದಲ್ಲಿ ಮಾತನಾಡಿದ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ, ಭಾರತ ಎಂದಿಗೂ ಯಾವುದೇ ದೇಶದ ಮೇಲೆ ದಂಡೆತ್ತಿ ಹೋದ ಉದಾಹರಣೆ ಇಲ್ಲ. ಭಾರತ ಶಾಂತಿ ಬಯಸುವ ದೇಶ. ಆದರೆ ಪಾಕಿಸ್ತಾನ ನಂಬಿಕೆಗೆ ಅರ್ಹ ದೇಶವಲ್ಲ. ಕದನ ವಿರಾಮ ಘೋಷಣೆಯಾದ ಮೂರು ಗಂಟೆಯಲ್ಲಿಯೇ ಉಲ್ಲಂಘನೆ ಮಾಡಿದೆ ಎಂದು ಹೇಳಿದರು. ವಿದ್ಯಾರಣ್ಯಪುರದ ಎನ್‌ಐಟಿ ಆಟದ ಮೈದಾನದಿಂದ ಸಹಕಾರ ನಗರದ ಗಣೇಶ ದೇವಸ್ಥಾನದವರೆಗೆ ತಿರಂಗ ಯಾತ್ರೆ ಸಾಗಿತ್ತು. ಯಾತ್ರೆಯಲ್ಲಿ ವಿಧಾನ ಪರಿಷತ್ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ, ನಿವೃತ್ತ ಮಾರ್ಷಲ್ ಎಸ್ ಪಿ ಸಿಂಗ್ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

*****

ಈ ಬಾರಿ ನೈರುತ್ಯ ಮುಂಗಾರು ಮಳೆ ವಾಡಿಕೆಗಿಂತ ಐದು ದಿನ ಮುಂಚಿತವಾಗಿ ಬರಲಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಮೇ ೨೭ ರಂದು ಕೇರಳ ಕರಾವಳಿಗೆ ಮುಂಗಾರು ಪ್ರವೇಶಿಸುವ ನಿರೀಕ್ಷೆಯಿದೆ. ಇದು ಕನಿಷ್ಠ ಐದು ವರ್ಷಗಳಲ್ಲಿಯೇ ಅತ್ಯಂತ ಮುಂಚಿನ ಮುಂಗಾರು ಆಗಮನವಾಗಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ. ಸಾಮಾನ್ಯವಾಗಿ ಮುಂಗಾರು ಮಳೆ ಜೂನ್ ೧ರ ಸುಮಾರಿಗೆ ಕೇರಳದ ದಕ್ಷಿಣ ಕರಾವಳಿಯನ್ನು ಪ್ರವೇಶಿಸಿಸಲು ಪ್ರಾರಂಭಿಸುತ್ತದೆ ಹಾಗೂ ಜುಲೈ ಮಧ್ಯದ ವೇಳೆಗೆ ಇಡೀ ದೇಶಾದ್ಯಂತ ವ್ಯಾಪಿಸುತ್ತದೆ. ಕಳೆದ ವರ್ಷ ಮುಂಗಾರು ಮೇ ೩೦ ರಂದು ಕೇರಳದ ಕರಾವಳಿಯನ್ನು ಪ್ರವೇಶಿಸಿತು.

*****

ಖೇಲೋ ಇಂಡಿಯಾ ಅಭಿಯಾನದಡಿ ಹದಿನೈದು ವರ್ಷಕ್ಕೂ ಕಡಿಮೆ ವಯಸ್ಸಿನ ಮಕ್ಕಳಿಗೆ ಎರಡು ಕಿಲೋಮೀಟರ್ ಸೈಕ್ಲಿಂಗ್ ಅನ್ನು ಚಿತ್ರದುರ್ಗದ ಓಬವ್ವ ಒಳಾಂಗಣ ಕ್ರೀಡಾಂಗಣದ ಹೊರಭಾಗದದಲ್ಲಿ ಆಯೋಜಿಸಲಾಗಿತ್ತು. ಚಿತ್ರದುರ್ಗ ಡಿವೈಎಸ್ಪಿ ದಿನಕರನ್ ಸೈಕ್ಲಿಂಗ್ ಚಾಲನೆ ನೀಡಿದರು, ಈ ಸಂದರ್ಭದಲ್ಲಿ ಮಾತನಾಡಿದ ದಿನಕರನ್ ಮಕ್ಕಳು ಮೊಬೈಲ್ ಬಳಕೆ ಕಡಿಮೆ ಮಾಡಬೇಕು ಇದರ ಬದಲಾಗಿ ಕ್ರೀಡಾ ಚಟುವಟಿಕೆಯ ಬಗ್ಗೆ ಗಮನ ಹರಿಸಬೇಕು ಎಂದರು.

*****

ದಾವಣಗೆರೆ ಜಿಲ್ಲೆಯ ವಿವಿಧ ಗ್ರಾಮ ಪಂಚಾಯಿಗಳಲ್ಲಿ ತೆರವಾಗಿರುವ ಖಾಲಿ ಸದಸ್ಯ ಸ್ಥಾನಗಳಿಗೆ ಉಪಚುನಾವಣೆ ನಡೆಸಲು ವೇಳಾಪಟ್ಟಿ ಪ್ರಕಟಿಸಲಾಗಿದೆ ಎಂದು ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ ತಿಳಿಸಿದ್ದಾರೆ. ಮೇ ೧೪ ನಾಮಪತ್ರ ಸಲ್ಲಿಸಲು ಕೊನೆಯ ದಿನವಾಗಿದ್ದು, ಮೇ ೧೫ ನಾಮಪತ್ರಗಳ ಪರಿಶೀಲನೆ, ಮೇ ೧೭ರಂದು ಉಮೇದುವಾರಿಕೆ ಹಿಂಪಡೆದುಕೊಳ್ಳಲು ಕೊನೆಯ ದಿನವಾಗಿದೆ.

*****

ಬಳ್ಳಾರಿಯ ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯದ ನಂದಿಹಳ್ಳಿ ಸ್ನಾತಕೋತ್ತರ ಕೇಂದ್ರದಲ್ಲಿ ಆರಂಭಗೊಳ್ಳಲಿರುವ ಉದ್ದೇಶಿತ ಸ್ಕೂಲ್ ಆಫ್ ಮೈನ್ಸ್ ಗೆ ಐಐಟಿ ಧನಬಾದ್ ಸಂಸ್ಥೆ ಶೈಕ್ಷಣಿಕ ಹಾಗೂ ಸಂಶೋಧನೆಯ ತಾಂತ್ರಿಕ ಮಾರ್ಗದರ್ಶನ ನೀಡಲು ಸಮ್ಮತಿಸಿದೆ ಎಂದು ವಿಶ್ವವಿದ್ಯಾಲಯದ ಕುಲಪತಿ ಡಾ. ಎಂ. ಮುನಿರಾಜು ಹೇಳಿದ್ದಾರೆ.

*****

ಪ್ರಪಂಚದಾದ್ಯಂತದ ಇಂದು ತಾಯಂದಿರ ದಿನವನ್ನು ಆಚರಣೆ ಮಾಡಲಾಗುತ್ತಿದೆ. ಸಹನೆ, ಪ್ರೀತಿ, ಕರುಣೆಯ ಮೂರ್ತರೂಪವೇ ತಾಯಿಯಾಗಿದ್ದು, ಅವಳ ನಿಸ್ವಾರ್ಥ ಪ್ರೇಮಕ್ಕೆ ಇಂದು ಕೃತಜ್ಞತೆ ಮತ್ತು ಗೌರವ ಸಲ್ಲಿಸುವ ದಿನವಾಗಿದೆ. ಪ್ರತಿವರ್ಷ ಮೇ ತಿಂಗಳ ಎರಡನೇ ಭಾನುವಾರದಂದು ಮಾತೃತ್ವದ ಬಗೆಗಿನ ವಿಶೇಷ ಭಕ್ತಿಯನ್ನು ಆಚರಿಸಲಾಗುವ ಈ ದಿನದಂದು, ವಿಶೇಷವಾಗಿ ನಾಗಾಲ್ಯಾಂಡ್ ಸೇರಿದಂತೆ ಹಲವೆಡೆ ಕುಟುಂಬಗಳು ಒಂದೆಡೆ ಸೇರಿ ತಾಯಂದಿರ ಆರೋಗ್ಯಕ್ಕೆ ಪ್ರಾರ್ಥಿಸಿ, ಈ ದಿನವನ್ನು ವಿಶೇಷವಾಗಿ ಆಚರಿಸುತ್ತಾರೆ.

*****

ಪ್ರಧಾನಿ ನರೇಂದ್ರ ಮೋದಿ ಅವರು ನವದೆಹಲಿಯಲ್ಲಿರುವ ತಮ್ಮ ನಿವಾಸದಲ್ಲಿ ಇಂದು ಉನ್ನತ ಮಟ್ಟದ ಸಭೆ ನಡೆಸಿದರು. ರಕ್ಷಣಾ ಸಚಿವ ರಾಜನಾಥ್ ಸಿಂಗ್, ವಿದೇಶಾಂಗ ವ್ಯವಹಾರಗಳ ಸಚಿವ ಡಾ. ಎಸ್. ಜೈಶಂಕರ್, ರಾಷ್ಟ್ರೀಯ ಭದ್ರತಾ ಸಲಹೆಗಾರ ಅಜಿತ್ ದೋವಲ್, ರಕ್ಷಣಾ ಸಿಬ್ಬಂದಿ ಮುಖ್ಯಸ್ಥ ಜನರಲ್ ಅನಿಲ್ ಚೌಹಾಣ್, ಸೇನಾ ಮುಖ್ಯಸ್ಥ ಜನರಲ್ ಉಪೇಂದ್ರ ದ್ವಿವೇದಿ, ನೌಕಾಪಡೆ ಮುಖ್ಯಸ್ಥ ಅಡ್ಮಿರಲ್ ದಿನೇಶ್ ಕೆ. ತ್ರಿಪಾಠಿ, ವಾಯುಪಡೆ ಮುಖ್ಯಸ್ಥ ಏರ್ ಚೀಫ್ ಮಾರ್ಷಲ್ ಅಮರ್ ಪ್ರೀತ್ ಸಿಂಗ್ ಸಭೆಯಲ್ಲಿ ಪಾಲ್ಗೊಂಡಿದ್ದರು. ಭಾರತ- ಪಾಕಿಸ್ತಾನ ದೇಶಗಳ ನಡುವೆ ನಿನ್ನೆ ಕದನ ವಿರಾಮ ಜಾರಿಗೆ ಬಂದ ಹಿನ್ನೆಲೆಯಲ್ಲಿ, ಉಭಯ ದೇಶಗಳ ಸೇನಾ ಕಾರ್ಯಾಚರಣೆಗಳ ಮಹಾನಿರ್ದೇಶಕರು (ಡಿಜಿಎಂಒಗಳು) ಪರಸ್ಪರ ಮಾತುಕತೆ ನಡೆಸಿದ ನಂತರ ಈ ಸಭೆ ನಡೆದಿದೆ. ಎರಡೂ ದೇಶಗಳ ಡಿಜಿಎಂಒಗಳು ನಾಳೆ ಮತ್ತೆ ಮಾತುಕತೆ ನಡೆಸಲಿದ್ದಾರೆ. ಪಾಕಿಸ್ತಾನ ಕದನ ವಿರಾಮ ಉಲ್ಲಂಘಿಸಿರುವುದನ್ನು ಭಾರತ ಗಂಭೀರವಾಗಿ ಪರಿಗಣಿಸುತ್ತದೆ. ಸಶಸ್ತ್ರ ಪಡೆಗಳು ಪರಿಸ್ಥಿತಿಯ ಬಗ್ಗೆ ಹೆಚ್ಚಿನ ನಿಗಾ ಕಾಯ್ದುಕೊಂಡಿವೆ. ಅಂತರರಾಷ್ಟ್ರೀಯ ಗಡಿ ಹಾಗೂ ನಿಯಂತ್ರಣ ರೇಖೆಯಲ್ಲಿ ಯಾವುದೇ ಉಲ್ಲಂಘನೆಯನ್ನು ಬಲವಾಗಿ ಎದುರಿಸಲು ಸೂಚನೆ ನೀಡಲಾಗಿದೆ ಎಂದು ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಸ್ರಿ ಕಳೆದ ರಾತ್ರಿ ಸುದ್ದಿಗಾರರಿಗೆ ತಿಳಿಸಿದ್ದಾರೆ.

***END***